**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ಬಂಗಾರಪೇಟೆ**

**ಸಿಸಿ ಸಂಖ್ಯೆ:685/2023** **ಚಾಸಾಃ 17 ಪ್ರಾಸಾಃ2**

**ಸಾಕ್ಷಿಯನ್ನು ದಿಃ09.01.2025 ರಂದು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು**

| | |
|---|---|
| ಹೆಸರು ಃ | ದಿವಾಕರ್ ನಾಯ್ಡು |
| ತಂದೆಯ ಹೆಸರುಃ | ಎಸ್.ಕೃಷ್ಣಮೂರ್ತಿ |
| ವಯಸ್ಸುಃ | 61 ವರ್ಷ |
| ವೃತ್ತಿಃ | ನಿವೃತ್ತ ಎ.ಎಸ್.ಐ |
| ವಾಸ ಸ್ಥಳಃ | ಬೆಂಗಳೂರು. |

**ಮುಖ್ಯ ವಿಚಾರಣೆ ಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

2017 ರಿಂದ ಮಾರ್ಚ್ 2023 ರವರಿಗೆ ಸಹಾಯಕ ಅರಕ್ಷಕ ನಿರೀಕ್ಷನಾಗಿ ಬಂಗಾರಪೇಟೆ ಪೋಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 01.01.2023 ರಂದು ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಚಾಸಾ.1 ರವರು ಠಾಣೆಗೆ ಹಾಜರಾಗಿ ಲಿಖಿತ ದೂರಿನ ಮೇರೆಗೆ ಠಾಣಾ ಮೊಕದ್ದಮ್ಮೆ ಸಂಖ್ಯೆ 01/2023 ರಂತೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಘನ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿರುತ್ತೇನೆ. ಅಪರಾಧವೂ ಘೋರ ಅಪರಾಧವಾದ್ದರಿಂದ ಮುಂದಿನ ತನಿಖೆಗಾಗಿ ಚಾಸಾ.18 ರವರೆಗೆ ಹಸ್ತಾಂತರಿಸಿರುತ್ತೇನೆ. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು , ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು , ಪ್ರಥಮ ವರ್ತಮಾನ ವರದಿಯನ್ನು ನಿಪಿ.5 ಎಂದು , ಸಾಕ್ಷಿಯ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರೋಪಿ ಪರ ವಕೀಲರಿಂದ ರಿಂದಃ**

ದಿಃ 01.01.2023 ರಂದು ಚಾಸಾ.1 ರವರು ಠಾಣೆಗೆ ಹಾಜರಾಗಿ ದೂರು ನೀಡಲಿಲ್ಲ ಎಂದರೆ ಸರಿಯಲ್ಲ. ಅರೋಪಿತರ ಮೇಲೆ ಸುಳ್ಳು ದೂರನ್ನು ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ, ಚಾಸಾ.1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

**ಓ ಹೇ ಕೇ ಸರಿ ಇದೆ.**

ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಬಂಗಾರಪೇಟೆ.

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ಬಂಗಾರಪೇಟೆ

**ಸಿಸಿ ಸಂಖ್ಯೆ:685/2023** **ಚಾಸಾಃ 3 ಪ್ರಾಸಾಃ3**

**ಸಾಕ್ಷಿಯನ್ನು ದಿಃ09.01.2025 ರಂದು ಕರೆಸಿ ಪ್ರಮಾಣ ವಚನ ಮೂಡಿಸಲಾಯಿತು**

| | |
|---|---|
| ಹೆಸರು ಃ | ಸಮೀನಾ ತಾಜ್ |
| ಗಂಡನ ಹೆಸರುಃ | ಖಾದರ್ ಷಾಷ |
| ವಯಸ್ಸುಃ | 30 ವರ್ಷ |
| ವೃತ್ತಿಃ | ಗೃಹಿಣಿ |
| ವಾಸ ಸ್ಥಳಃ | ಕ್ಯಾಲನೂರು. |

**ಮುಖ್ಯ ವಿಚಾರಣೆ ಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಏನು ಗೊತ್ತಿಲ್ಲ. ಪ್ರಕರಣದ ಬಗ್ಗೆ ಪೋಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎಪಿಪಿ ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಶೇಕ್ ಅಹಮದ್ ನನ್ನ ತಂದೆ ಎಂದರೆ ಸರಿ. ದಿಃ 01.01.2023 ರಂದು ಮಧ್ಯಾಹ್ನ 3.15 ಗಂಟೆಗೆ ಚಾಸಾ.1 ರವರು ನನಗೆ ಕರೆ ಮಾಡಿ ಕೋಲಾರ ಕೆಜಿಎಫ್ ಮುಖ್ಯ ರಸ್ತೆಯಲ್ಲಿ ನನ್ನ ತಂದೆ ಅಪಘಾತದಲ್ಲಿ ತೀರಿಕೊಂಡರು ಶವವೂ ಬಂಗಾರಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಇದೆ ಎಂದು ತಿಳಿಸಿದರು ಎಂದರೆ ಸರಿಯಲ್ಲ. ಅದೇದಿನ ಮಧ್ಯಾಹ್ನ 1 ಗಂಟೆಗೆ ವಕ್ರಕುಂಟೆ ಗ್ರಾಮದ ಕೆಜಿಎಫ್ ಗೆ ಬರಲು ನನ್ನ ತಂದೆ ಟಿ ವಿ ಎಕ್ಸ್ ಎಲ್ 100 ಹೆವಿ ಡ್ಯೂಟಿ ವಾಹನವನ್ನು ಕೆಎ.08-ಇಎ-4079 ಚಲಾಯಿಸಿಕೊಂಡು ಕೋಲಾರ - ಕೆಜಿಎಫ್ ಮುಖ್ಯ ರಸ್ತೆಯ ಅನಿಗಾನಹಳ್ಳಿಯ ಗೇಟ್ ಸಮೀಪವಿರುವ ಎಸ್ ಎನ್ ಸಿಟಿ ಮುಂಭಾಗದ ರಸ್ತೆಯ ಎಡಭಾಗದಲ್ಲಿ ಬರುತ್ತಿದ್ದಾಗ ಹಿಂದೆಯಿಂದ ಕೆಎಸ್ ಆರ್ ಟಿಸಿ ಬಸ್ಸು ಸಂಖ್ಯೆ ಕೆಎ.07-ಎಫ್-1459 ಬಸ್ಸನ್ನು ಅದರ ಚಾಲಕ ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿ ಡಿಕ್ಕಿಪಡಿಸಿದ ಪರಿಣಾಮ ನನ್ನ ತಂದೆ ಕೆಳಗೆ ಸಿಲುಕಿ ಬಸ್ಸಿನ ಚಕ್ರವೂ ಮೈಮೇಲೆ ಹರಿದು

ತಲೆಗೆ ತೀವ್ರ ಸ್ವರೂಪದ ಗಾಯವಾಗಿ ಸ್ಥಳದಲ್ಲೇ ಮೃತಪಟ್ಟಿರುತ್ತಾರೆಂದು ಮತ್ತು ಚಾಲಕ ಪರಾರಿಯಾದ ಎಂದು ತಿಳಿದು ಬಂತು ಎಂದರೆ ಸರಿಯಲ್ಲ. ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯನ್ನು ಯಥವತ್ತಾಗಿ ಓದಿ ಹೇಳಲಾಗಿದ್ದು ಸಾಕ್ಷಿ ನಿರಾಕರಿಸಿದ ಕಾರಣ ಸಾಕ್ಷಿಯ ಹೇಳಿಕೆಯನ್ನು ನಿಪಿ.6 ಎಂದು ಗುರುತಿಸಲಾಯಿತು. ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಅರೋಪಿಗಳ ಪರ ವಕೀಲರಿಂದಃ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)**

**ಓ ಹೇ ಕೇ ಸರಿ ಇದೆ.**

ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ಬಂಗಾರಪೇಟೆ.